ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 4/12/2020

# ಭಿನ್ನಮತ ವಿಸ್ತರಣೆ

ಉದಾ 4/12/20

## ಸಿ.ಪಿ.ಯೋಗೇಶ್ವರ್‌ಗೆ ಸಚಿವ ಸ್ಥಾನ ನೀಡುವುದಕ್ಕೆ ವಿರೋಧ
## 10 ಶಾಸಕರಿಂದ ಪ್ರತ್ಯೇಕ ಸಭೆ | ಸಚಿವ ಸ್ಥಾನಕ್ಕಾಗಿ ಬಿಗಿ ಪಟ್ಟು

ಬೆಂಗಳೂರು: ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ದಿನಾಂಕ ನಿಗದಿಯಾಗಿರುವಂತೆ ಸಚಿವ ಸ್ಥಾನ ಆಕಾಂಕ್ಷಿಗಳಲ್ಲಿ ಅಸಮಾಧಾನ ಭುಗಿಲೆದ್ದಿದ್ದು, ಆದರಲ್ಲೂ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಸೋತಿರುವ ಸಿ.ಪಿ.ಯೋಗೇಶ್ವರ್‌ಗೆ ಸಚಿವ ಸ್ಥಾನ ನೀಡುವ ಬಗ್ಗೆ ಮೂಲ ಬಿಜೆಪಿಗರಲ್ಲಿ ತೀವ್ರ ವಿರೋಧ ವ್ಯಕ್ತವಾಗಿದೆ. ಸಚಿವ ಸ್ಥಾನ ಕೈತಪ್ಪಲಿರುವ ಎಚ್.ವಿಶ್ವನಾಥ್ ಮತ್ತು ಎಂಟಿಬಿ ನಾಗರಾಜ್ ಅವರ ಅಸಮಾಧಾನ ಶಮನವಾಗುವ ಮುನ್ನವೇ ಈ ಭಿನ್ನಮತ ಸಿಎಂ ಯಡಿಯೂರಪ್ಪ ಅವರಿಗೆ ಹೊಸ ಸಂಕಟಕ್ಕೆ ಕಾರಣವಾಗಿದೆ.



ಮೂಲ ಬಿಜೆಪಿ ಕೋಟಾದಡಿ ವಿಧಾನಸಭೆ ಚುನಾವಣೆಯಲ್ಲಿ ಸೋತಿರುವ ಸಿ.ಪಿ.ಯೋಗೇಶ್ವರ್ ಅವರಿಗೆ ಸಚಿವ ಸ್ಥಾನ ನೀಡುವ ಮಾತುಗಳ ಬೆನ್ನಲೇ ಮೂಲ ಬಿಜೆಪಿ ಶಾಸಕರು ಬಂಡೆದ್ದಿದ್ದು, ಪ್ರತ್ಯೇಕ ಸಭೆ ಮಾಡುವ ಮೂಲಕ ಪ್ರತಿರೋಧ ತೋರಿರುವುದು ಸಂಚಲನ ಮೂಡಿಸಿದೆ.

ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂಪುಟದಲ್ಲಿ ಸ್ಥಾನಮಾನ ನೀಡಬೇಕು ಎಂದು ಒತ್ತಾಯಿಸಿ ಶಾಸಕರ ಭವನದಲ್ಲೇ 10ಕ್ಕೂ ಹೆಚ್ಚು ಶಾಸಕರು ಸಭೆ ಸೇರಿ ಚರ್ಚಿಸಿದ್ದಾರೆ. ಮೇಲ್ನೋಟಕ್ಕೆ ಕಲ್ಯಾಣ ಕರ್ನಾಟಕ ಭಾಗಕ್ಕೆ ಸ್ಥಾನಮಾನಕ್ಕೆ ಒತ್ತಡ ಹೇರಿದರೂ ಸಿ.ಪಿ. ಯೋಗೇಶ್ವರ್‌ಗೆ ಸಚಿವ ಸ್ಥಾನ ನೀಡುವ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಂಗಳವಾರವೂ ಮತ್ತೊಮ್ಮೆ ಸಭೆ ಸೇರಲು ನಿರ್ಧರಿಸಿದ್ದು, ಬಿಜೆಪಿಯಲ್ಲಿ ಆಂತರಿಕ ಬಿಕ್ಕಟ್ಟು ತೀವ್ರವಾಗುವ ಲಕ್ಷಣ ಕಾಣುತ್ತಿದೆ.

ಈ ಮಧ್ಯೆ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ವಿರುದ್ಧ ಅಸಮಾಧಾನ ಹೊರಹಾಕುತ್ತಲೇ ಇದ್ದ ಅನರ್ಹ ಶಾಸಕ ಎಚ್.ವಿಶ್ವನಾಥ್ ಸೋಮವಾರ ಸಿಎಂ ನಿವಾಸಕ್ಕೆ ಭೇಟಿ ನೀಡಿ ಚರ್ಚೆ ನಡೆಸಿದರು. ಭೇಟಿ ಬಳಿಕ ಸಮಾಧಾನದಿಂದಲೇ ಪ್ರತಿಕ್ರಿಯಿಸಿದ ವಿಶ್ವನಾಥ್, ಮುಂದೆ ಕಾದು ನೋಡೋಣ ಎಂದಿದ್ದಾರೆ. ಮತ್ತೊಬ್ಬ ಅನರ್ಹ ಶಾಸಕ ಎಂ.ಟಿ.ಬಿ. ನಾಗರಾಜ್ ಕೂಡ ಅದೇ ಧಾಟಿಯಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದು, ಯಡಿಯೂರಪ್ಪ ಅವರ ಮನವೊಲಿಕೆ ಪ್ರಯತ್ನ ಫ‌ಲ ನೀಡಿದಂತಿದೆ.

ಸಚಿವ ಸ್ಥಾನ ಕೈತಪ್ಪಲಿದೆ ಎನ್ನಲಾದ ಮಹೇಶ್ ಕುಮಟಳ್ಳಿ ಅವರಿಗೂ ಸಚಿವಗಿರಿ ಕೊಡಿಸಲು ರಮೇಶ್ ಜಾರಕಿಹೊಳಿ ಕಸರತ್ತು ಮುಂದುವರಿಸಿದ್ದಾರೆ.

▶ 8ನೇ ಪುಟಕ್ಕೆ

## ಮೂಲ ಬಿಜೆಪಿಗರ ಸಭೆಗೆ ಕೆಂಗಣ್ಣು

• ಎಂ. ಕೀರ್ತಿಪ್ರಸಾದ್

■ ಇಂದೂ ಸಭೆ ನಡೆಸಿ ವರಿಷ್ಠರಿಗೆ ಒತ್ತಡ ಹಾಕಲು ತಂತ್ರ

■ ಸಂಪುಟ ವಿಸ್ತರಣೆ ಬೆನ್ನಲ್ಲೇ ಸಿಎಂ ಬಿಎಸ್‌ವೈಗೆ ಹೊಸ ತಲೆನೋವು

ಬೆಂಗಳೂರು: ಸಂಪುಟ ವಿಸ್ತರಣೆ ವೇಳೆ ಮಾಜಿ ಸಚಿವ ಸಿ.ಪಿ. ಯೋಗೇಶ್ವರ್ ಅವರಿಗೆ ಸಚಿವ ಸ್ಥಾನ ನೀಡುವುದನ್ನು ವಿರೋಧಿಸಿ ಮೂಲ ಬಿಜೆಪಿಯ 10ಕ್ಕೂ ಹೆಚ್ಚು ಶಾಸಕರು ಪ್ರತ್ಯೇಕ ಸಭೆ ನಡೆಸಿ ಬಹಿರಂಗವಾಗಿಯೇ ವಿರೋಧ ವ್ಯಕ್ತಪಡಿಸಿರುವುದು ರಾಜ್ಯ ಬಿಜೆಪಿ ಹಿರಿಯ ನಾಯಕರ ಕಣ್ಣು ಕೆಂಪಾಗಿಸಿದೆ.

ಪ್ರತ್ಯೇಕ ಸಭೆ ನಡೆಸುವುದು ಮಾತ್ರವಲ್ಲದೆ, ಸಿ.ಪಿ. ಯೋಗೇಶ್ವರ್ ಅವರಿಗೆ ಸಚಿವಗಿರಿ ನೀಡುವುದನ್ನು ಬಹಿರಂಗವಾಗಿ ವಿರೋಧಿಸುವ ಮೂಲಕ ಪಕ್ಷದ ಹೈಕಮಾಂಡ್ ನಿರ್ಧಾರವನ್ನೇ ಪ್ರಶ್ನಿಸುವಂತಾಗಿರುವುದು ಹಿರಿಯ ನಾಯಕರ ಆಕ್ರೋಶಕ್ಕೆ ಕಾರಣವಾಗಿದೆ. ಪಕ್ಷದ ವೇದಿಕೆಯಲ್ಲಿ ಚರ್ಚಿಸುವ ವಿಚಾರವನ್ನು ಸಾರ್ವಜನಿಕವಾಗಿ ಚರ್ಚಿಸುವ ಮೂಲಕ ಪಕ್ಷದ ಶಿಸ್ತು ಮೀರಿ ತೋರಿದ ಪ್ರತಿರೋಧದ ದನಿಯ ಸದ್ದಡಗಿಸುವ ಪ್ರಯತ್ನವೂ ತೆರೆಮರೆಯಲ್ಲೇ ನಡೆಯುವಂತಿದೆ. ಜತೆಗೆ ಸಂಪುಟ ವಿಸ್ತರಣೆ ಪ್ರಕ್ರಿಯೆ ಕಗ್ಗಂಟಾಗಿದ್ದು, ಮುಖ್ಯಮಂತ್ರಿಗಳ ನಡೆ ಬಗ್ಗೆಯೂ ಅಪಸ್ವರ ಕೇಳಿಬರಲಾರಂಭಿಸಿದೆ.

ಅನರ್ಹ ಶಾಸಕರ ಪೈಕಿ ಉಪಚುನಾವಣೆಯಲ್ಲಿ 11 ಮಂದಿ ಗೆದ್ದ ಬಳಿಕ ಸಂಪುಟ ವಿಸ್ತರಣೆ ಕಸರತ್ತು ನಿರಂತರವಾಗಿ ನಡೆದಿದ್ದು, ದಿನ ಕಳೆದಂತೆ ಕಗ್ಗಂಟಾಗಿದೆ. ಈವರೆಗೆ ಗೆದ್ದ-ಸೋತ ಅನರ್ಹ ಶಾಸಕರಿಗೆ ಸ್ಥಾನಮಾನ ನೀಡುವ ವಿಚಾರದಲ್ಲಿ ಮೂಡಿದ್ದ ಗೊಂದಲ ಇದೀಗ ಮೂಲ ಬಿಜೆಪಿ ವಲಯಕ್ಕೆ ವರ್ಗಾವಣೆಯಾದಂತಿದೆ.

**ಶಾಸಕರನ್ನು ಸೆಳೆಯುವಲ್ಲಿ ಮಹತ್ತರ ಪಾತ್ರ:** ಹಿಂದಿನ ಮೈತ್ರಿ ಸರ್ಕಾರದಲ್ಲಿ ಅತೃಪ್ತ ಕಾಂಗ್ರೆಸ್, ಜೆಡಿಎಸ್ ಶಾಸಕರನ್ನು ಸೆಳೆಯುವ ಪ್ರಯತ್ನದಲ್ಲಿ ಅಂತಿಮವಾಗಿ 17 ಮಂದಿ ಬಿಜೆಪಿ ನಾಯಕರ ಸಂಪರ್ಕಕ್ಕೆ ಸಿಕ್ಕರು. ಅವರ ಮನವೊಲಿಸಿ ಪಕ್ಷಕ್ಕೆ ಸೆಳೆಯುವ ಪ್ರಯತ್ನದಲ್ಲಿ ಆರಂಭದಲ್ಲಿ ಯಶಸ್ಸು ಸಿಗದಿದ್ದಾಗ ಹಿರಿಯ ನಾಯಕರು ಕೈಚೆಲ್ಲಿದ್ದರು.

▶ 8ನೇ ಪುಟಕ್ಕೆ

ಖಾತೆ ಜತೆಗೆ ಕೊರಡಿಗೂ ಪಟ್ಟು » 5

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 4/2/2020

# ವಿವಾದಾತ್ಮಕ ಹೇಳಿಕೆ: ಸ್ಪೀಕರ್‌ಗೆ ಬ್ರಿಜೇಶ್ ಕಾಳಪ್ಪ ಪತ್ರ

**ಬೆಂಗಳೂರು:** ಬಿಜೆಪಿ ಸಂಸದ ಅನಂತ್ ಕುಮಾರ್ ಹೆಗಡೆ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕಾಂಗ್ರೆಸ್ ವಕ್ತಾರ ಬ್ರಿಜೇಶ್ ಕಾಳಪ್ಪ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಬರೆದಿದ್ದಾರೆ.

ಅನಂತ್ ಕುಮಾರ್ ಹೆಗಡೆ ಆಗಾಗ ವಿವಾದಾತ್ಮಕ ಹೇಳಿಕೆಗಳನ್ನು ನೀಡುತ್ತಲೇ ಬರುತ್ತಿದ್ದಾರೆ. ಈ ವರ್ತನೆ ನೋಡಿದರೆ ಅವರು ಮಾನಸಿಕವಾಗಿ ಅಸ್ವಸ್ಥರಾಗಿದ್ದಾರ ಎಂಬ ಪ್ರಶ್ನೆ ಮೂಡುತ್ತದೆ. ಸಂವಿಧಾನದ ಪರಿಚ್ಛೇದ 102ರ ಪ್ರಕಾರ ಮಾನಸಿಕ ಅಸ್ವಸ್ಥ ವ್ಯಕ್ತಿ ಸಂಸತ್ ಸದಸ್ಯರಾಗಿ ಮುಂದುವರಿಯುವಂತಿಲ್ಲ. ಹಾಗಾಗಿ ತಕ್ಷಣ ಅವರ ವೈದ್ಯಕೀಯ ತಪಾಸಣೆ ನಡೆಸಿ, ಮಾನೋರೋಗವಿದ್ದರೆ ಉತ್ತಮ ತಜ್ಞರಿಂದ ಚಿಕಿತ್ಸೆ ಕೊಡಿಸಿ. ಒಂದು ವೇಳೆ ಯಾವುದೇ ಸಮಸ್ಯೆ ಇಲ್ಲ ಎಂದಾದರೆ ಕಾನೂನಾತ್ಮಕವಾಗಿ ಅವರ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಒತ್ತಾಯಿಸಿದ್ದಾರೆ.

ಅನಂತ್ ಕುಮಾರ್ ಹೆಗಡೆ ಈ ಹಿಂದೆ 'ಹಿಂದೂ ಯುವತಿಯರನ್ನು ಮುಟ್ಟಿದರ ಕೈ ಕಡಿಯಿರಿ', 'ಸಂವಿಧಾನವನ್ನು ಬದಲಿಸುವ ಕಾಲ ಕೂಡಿ ಬಂದಿದೆ' ಎಂಬೆಲ್ಲಾ ಹೇಳಿಕೆಗಳನ್ನು ನೀಡಿ ವಿವಾದ ಸೃಷ್ಟಿಸಿದ್ದರು. ಗಾಂಧೀಜಿ ಕೊಂದ ಗೋಡ್ಸೆ ಬೆಂಬಲಿಸಿ ಹಿಂದೆ ಟ್ವೀಟ್ ಕೂಡ ಮಾಡಿದ್ದರು. ಇದೀಗ, ಬೆಂಗಳೂರಿನ ಕಾರ್ಯಕ್ರಮವೊಂದರಲ್ಲಿ ಮಾತನಾಡಿ 'ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಿಟೀಷರ ಜೊತೆಗೆ ಒಳಒಪ್ಪಂದ ಮಾಡಿಕೊಂಡವರನ್ನು ಇತಿಹಾಸದ ಪುಟದಲ್ಲಿ ಸ್ವಾತಂತ್ರ್ಯ ಹೋರಾಟಗಾರರೆಂದು ಬಿಂಬಿಸಲಾಯಿತು, ಅಂತಹ ವ್ಯಕ್ತಿಗಳನ್ನು ಈ ದೇಶ ಮಹಾತ್ಮ ಎಂದು ಕರೆಯುತ್ತದೆ. ಇದನ್ನು ಕೇಳಿದರೆ ತಣ್ಣಗಿರುವ ರಕ್ತ ಹೆಪ್ಪುಗಟ್ಟಿ ಹೋಗುತ್ತದೆ' ಎಂಬ ಹೇಳಿಕೆಗಳನ್ನು ನೀಡಿ ಮಹಾತ್ಮ ಗಾಂಧೀಜಿ ಸೇರಿದಂತೆ ಸ್ವಾತಂತ್ರ್ಯ ಹೋರಾಟಗಾರರ ನಿಸ್ವಾರ್ಥ ಹೋರಾಟ ಹಾಗೂ ತ್ಯಾಗ, ಬಲಿದಾನಗಳ ಬಗ್ಗೆ ಅನುಮಾನ ಹುಟ್ಟಿಸುವಂತಹ ಹೇಳಿಕೆಗಳನ್ನು ನೀಡಿ ವಿವಾದ ಸೃಷ್ಟಿಸಿದ್ದಾರೆ. ಇಂಥವರು ಸಂಸದರಾಗಲು ಅರ್ಹರಲ್ಲ ಎಂದು ಬ್ರಿಜೇಶ್ ಕಾಳಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ.